**ಕರ್ನಾಟಕ ಸರ್ಕಾರ**

**ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು ಆಯ್ಕೆ ಪ್ರಾಧಿಕಾರ ಸಮಿತಿ, ಗುಲಬರ್ಗಾ.**

**: ತಿದ್ದುಪಡಿ ಅಧಿಸೂಚನೆ :**

ಸಂ/ಕಂ/ಸಿಬ್ಬಂದಿ-1/85/2009-10 ದಿನಾಂಕ: 30.09.2009.

**ವಿಷಯ: ಗುಲಬರ್ಗಾ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.**

ಉಲ್ಲೇಖ: ಈ ಕಾರ್ಯಾಲಯದ ಅಧಿಸೂಚನೆ ಸಮ ಸಂಖ್ಯೆ ದಿನಾಂಕ: 26.09.2009.

---

ಗುಲಬರ್ಗಾ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಿಗರ ಹುದ್ದೆಗಳಿಗೆ ನೇರ ನೇಮಕಾತಿಗಾಗಿ ಉಲ್ಲೇಖಿತ ಅಧಿಸೂಚನೆಯಲ್ಲಿ ತಿಳಿಸಿರುವ ಅರ್ಜಿ ಸಲ್ಲಿಸುವ ವಿಧಾನ ಮತ್ತು ಶುಲ್ಕ ಸಂದಾಯ ಮಾಡುವ ಬಗ್ಗೆ ಈ ಕೆಳಗಿನಂತೆ ಮಾರ್ಪಡಿಸಲಾಗಿದೆ.

1) ಅರ್ಜಿ ಸಲ್ಲಿಸುವ ವಿಧಾನ : ಸರ್ಕಾರದ ಸೂಚನೆಗಳನ್ವಯ ಅರ್ಜಿಗಳನ್ನು ಇನ್ನು ಮುಂದೆ "ON LINE" (ಎಲೆಕ್ಟ್ರಾನಿಕ್ ಮಾರ್ಗ) ಮೂಲಕ ಮಾತ್ರ ಸಲ್ಲಿಸತಕ್ಕದ್ದಾಗಿದೆ. ಖುದ್ದಾಗಿ ಅಥವಾ ಅಂಚೆ ಮೂಲಕ ಈ ಕಚೇರಿಗೆ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಭ್ಯರ್ಥಿಯು ಇಲಾಖೆಯ ಅಧಿಕೃತ ವೆಬ್ ಸೈಟ್ http://recruitment.kar.nic.in/va-gulbarga ನಲ್ಲಿ ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು. ಅಭ್ಯರ್ಥಿಯು Submit Buttonನ್ನು ಒತ್ತಿದರೆ ಅರ್ಜಿ ಸಂಖ್ಯೆ (Reference Number) ಸೃಷ್ಟಿಯಾಗುತ್ತದೆ. ಆನ್ ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಸ್ವೀಕೃತಿ ಪತ್ರ (Acknowledge Slip) ಮತ್ತು ದ್ವಿ ಪ್ರತಿ ಚಲನ್‌ನ್ನು ತೆಗೆದುಕೊಳ್ಳತಕ್ಕದ್ದು. ಈ ಚಲನನ್ನು ಅರ್ಜಿ ಶುಲ್ಕದೊಂದಿಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಅಥವಾ ಸ್ಟೇಟ್ ಬ್ಯಾಂಕ್ ಆಫ್ ಹೈದ್ರಾಬಾದ್ ಯಾವುದಾದರು ಶಾಖೆಯಲ್ಲಿ ಚಲನ್‌ನಲ್ಲಿ ತಿಳಿಸಿರುವ ಬ್ಯಾಂಕ್ ಖಾತೆ ಸಂಖ್ಯೆಯಲ್ಲಿ ಪಾವತಿಸಬೇಕು. ಅಭ್ಯರ್ಥಿಗಳು ಸ್ವೀಕೃತಿ ಸ್ಲಿಪ್‌ನ್ನು ಮತ್ತು ಚಲನ್ ಪಾವತಿಯ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು. ಇನ್ನೊಂದು ಚಲನ್ ಪ್ರತಿ ಬ್ಯಾಂಕ್ ಬಳಿ ಇರುತ್ತದೆ. ಒಂದು ವೇಳೆ ಅರ್ಜಿ ಸಲ್ಲಿಸಿ ಶುಲ್ಕ ಪಾವತಿಸದಿದ್ದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿಗಳನ್ನು ದಿನಾಂಕ: 04.10.2009 ರಿಂದ ವೆಬ್ ಸೈಟ್‌ನಲ್ಲಿ ಭರ್ತಿ ಮಾಡತಕ್ಕದ್ದು.

2) ಪರಿಷ್ಕರಿಸಿದ ಅರ್ಜಿ ಶುಲ್ಕ.

| | |
|---|---|
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ | ರೂ. 100/- |
| ಸಾಮಾನ್ಯ ಅಭ್ಯರ್ಥಿಗಳಿಗೆ | ರೂ. 200/- |

ಈ ಕಾರ್ಯಾಲಯದ ಅಧಿಸೂಚನೆ ದಿನಾಂಕ: 26.02.2009 ರಲ್ಲಿ ಗುಲಬರ್ಗಾ ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಾಧಿಕಾರಿಗಳ ಹುದ್ದೆಗೆ ನೇರ ನೇಮಕಾತಿ ಮಾಡಲು ಅರ್ಜಿಗಳನ್ನು ಅಹ್ವಾನಿಸಲಾಗಿತ್ತು. ಆದರೆ ಸರ್ಕಾರದ ತಿದ್ದುಪಡಿ ಅಧಿಸೂಚನೆ ಸಂಖ್ಯೆ/ಕಂಇ/299/ಬಿಎಸ್‌ಸಿ/2006, ದಿನಾಂಕ: 08.09.2009ರಲ್ಲಿ ಸದರಿ ನೇಮಕಾತಿ ಪ್ರಕ್ರಿಯೆ ರದ್ದು ಪಡಿಸಿ ಅರ್ಜಿಗಳನ್ನು ಮರಳಿಸುವಂತೆ ಸೂಚಿಸಿರುತ್ತಾರೆ. ಕಾರಣ ಈ ಕಛೇರಿಯಲ್ಲಿ ಸ್ವೀಕೃತವಾದ ಅರ್ಜಿಗಳನ್ನು ಸಂಬಂಧಿಸಿದ ಅಭ್ಯರ್ಥಿಗಳ ವಿಳಾಸಕ್ಕೆ ಮರಳಿಸಲಾಗುತ್ತಿದೆ.

(ಡಾ: ವಿಶಾಲ್. ಆರ್) ಭಾ.ಆ.ಸೇ 30/9/09

ಜಿಲ್ಲಾಧಿಕಾರಿಗಳು ಹಾಗೂ

ಅಧ್ಯಕ್ಷರು ಆಯ್ಕೆ ಪ್ರಾಧಿಕಾರ ಸಮಿತಿ

ಗುಲಬರ್ಗಾ.